ನಿಯಮಾನುಸಾರ ಇಂತಹ ಪ್ರಕರಣಗಳನ್ನು ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ದೂರು ಸಲ್ಲಿಸಬಹುದಾಗಿದೆ. ಇಂತಹ ದೂರುಗಳು ಇಲಾಖೆಯ ಗಮನಕ್ಕೆ ಬಂದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು. ಈ ವರೆವಿಗೂ ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿಲ್ಲ.

ಸರ್ವಶಿಕ್ಷಣ ಅಭಿಯಾನ ಕಾರ್ಯಕ್ರಮ

451 (345) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಸರ್ವ ಶಿಕ್ಷ ಅಭಿಯಾನ ಯೋಜನೆಯಡಿಯಲ್ಲಿ ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಶಾಲೆಗಳನ್ನು ಆಯ್ಕೆ ಮಾಡಲಾಗಿದೆ; ಈ ಕಾರ್ಯಕ್ರಮದ ಅನುಷ್ಠಾನಕ್ಕೆ ಮಂಜೂರಾದ ಹಣವೆಷ್ಟು? ಇದುವರೆಗೂ ಖರ್ಚಾದ ಹಣ ಎಷ್ಟು: ಈ ಕಾರ್ಯಕ್ರಮದ ಅನುಷ್ಠಾನಗೊಳಿಸುವಲ್ಲಿ ಸ್ಥಳೀಯ ಶಾಸಕರ ಅಧಿಕಾರ ಹಾಗೂ ಪಾತ್ರವೇನು? ವಿವರ ತಿಳಿಸುವುದು.

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

1. ಸರ್ವ ಶಿಕ್ಷ ಅಭಿಯಾನ ಯೋಜನೆಯಡಿಯಲ್ಲಿ ಶಿವಮೊಗ್ಗ ಜಿಲ್ಲೆಯ ಎಲ್ಲಾ ಸರ್ಕಾರಿ ಕಿರಿಯ ಮತ್ತು ಹಿರಿಯ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಅನುಷ್ಠಾನಕ್ಕೆ 2001-02ನೇ ಸಾಲಿಗೆ ಶಿವಮೊಗ್ಗ ಜಿಲ್ಲೆಗೆ ಒಟ್ಟು ರೂ.634.41 ಲಕ್ಷಗಳ ಯೋಜನಾ ವೆಚ್ಚಕ್ಕೆ ಕೇಂದ್ರ ಸರ್ಕಾರದ ಮಂಜೂರಾತಿ ದೊರೆತಿದ್ದು, ಇದರಲ್ಲಿ ಮೊದಲ ಕಂತಾಗಿ ರೂ.230.75 ಲಕ್ಷಗಳನ್ನು ಶಿವಮೊಗ್ಗ ಜಿಲ್ಲಾ ಸರ್ವ ಶಿಕ್ಷ ಅಭಿಯಾನ ಸಮಿತಿಗೆ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗಿದೆ. ಈ ಹಣವನ್ನು ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಶಿವಮೊಗ್ಗ ಜಿಲ್ಲೆಯ ಪ್ರಾಥಮಿಕ ಶಾಲೆಗಳ ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮಿತಿಗಳಿಗೆ ಹಂಚಿಕೆ ಮಾಡಲಾಗಿದೆ.

ಕ್ಷೇತ್ರ ಅನುಷ್ಠಾನ ಸಮಿತಿಗಳ ಮುಖಾಂತರ ರೂ.46.94 ಲಕ್ಷಗಳನ್ನು ಪ್ರಗತಿ ಕಾರ್ಡುಗಳನ್ನು ಸರ್ಕಾರಿ ಶಾಲಾ ಮಕ್ಕಳಿಗೆ ಸರಬರಾಜು ಮಾಡುವ ಸಲುವಾಗಿ ಖರ್ಚು ಮಾಡಲಾಗಿದೆ. ಉಳಿದ ಸರ್ವ ಶಿಕ್ಷ ಅಭಿಯಾನ ಕಾರ್ಯ ಕ್ರಮಗಳು ಪ್ರಗತಿಯಲ್ಲಿವೆ.

ಮಾನ್ಯ ಶಾಸಕರು ವಿಭಾಗಮಟ್ಟದ ಕಾರ್ಯಾನುಷ್ಠಾನ ಸಮಿತಿಯಲ್ಲಿ ಗೌರವಾಧ್ಯಕ್ಷರಾಗಿ, ಹಾಗೂ ಜಿಲ್ಲಾಮಟ್ಟದ ಕಾರ್ಯಾನುಷ್ಠಾನ ಸಮಿತಿಯಲ್ಲಿ ಪದನಿಮಿತ್ತ ಸದಸ್ಯರಾಗಿ ಕಾರ್ಯನಿರ್ವಹಿಸುವ ಅಧಿಕಾರ ಹೊಂದಿರುತ್ತಾರೆ.

ಶಿವಮೊಗ್ಗ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡ

452 (347) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ವಂತ ಕಟ್ಟಡ ಹೊಂದಿರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಈ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ವಿವರ ತಿಳಿಸುವುದು?

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

1. ಶಿವಮೊಗ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ವಂತ ಕಟ್ಟಡ ಹೊಂದಿರದ

ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಒಟ್ಟು 21.

ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ ಒಟ್ಟು 3.

ರಾಜ್ಯ ಮುಂದುವರೆದ ಯೋಜನೆಯಡಿ ಕೊಠಡಿ ನಿರ್ಮಾಣಕ್ಕಾಗಿ 2002-03ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ರೂ.6.00 ಲಕ್ಷಗಳಲ್ಲಿ 4 ಕೊಠಡಿಗಳನ್ನು ನಿರ್ಮಿಸಲಾಗುವುದು. ಮುಂಬರುವ ವರ್ಷಗಳಲ್ಲಿ ರಾಜ್ಯದ ಆಯವ್ಯಯ ಲಭ್ಯತೆಯನ್ನಾಧರಿಸಿ ಹಂತ ಹಂತವಾಗಿ ಕೊಠಡಿಗಳ ಕೊರತೆಯನ್ನು ನೀಗಿಸಲಾಗುವುದು. 3 ಪ್ರೌಢ ಶಾಲೆಗಳ ಪೈಕಿ ಸರ್ಕಾರಿ ಪ್ರೌಢ ಶಾಲೆ, ದುರ್ಗಿಗುಡಿ ಇಲ್ಲಿಗೆ ಕಟ್ಟಡ ನಿರ್ಮಿಸಲು ರೂ.7.00ಲಕ್ಷಗಳನ್ನು ಸರ್ಕಾರಿ ಪ್ರೌಢ ಶಾಲೆ, ಹಾರ್ನಹಳ್ಳಿ ಇದಕ್ಕೆ ಹುಡ್ಕೋ ಯೋಜನೆಯಡಿ 5 ಕೊಠಡಿಗಳನ್ನು ನಿರ್ಮಿಸಲು ಅವಕಾಶ ಕಲ್ಪಿಸಿಕೊಳ್ಳಲಾಗಿದೆ, ಉಳಿದ ಒಂದು ಪ್ರೌಢಶಾಲೆ ನಿಧಿಗೆ ಕಟ್ಟಡ ನಿರ್ಮಿಸಲು ರಾಜ್ಯ ಆಯವ್ಯಯದ ಲಭ್ಯತೆಯನ್ನಾಧರಿಸಿ ಕ್ರಮ ಕೈಗೊಳ್ಳಲಾಗುವುದು.

ಮಾಗಡಿ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸ ಶಾಲೆ ಕಟ್ಟಡಗಳು

454 (787) ಶ್ರೀ ಚಿನ್ನಿಗಪ್ಪ.ಸಿ. (ಕೊರಟಗೆರೆ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. 1999-2002ನೇ ಸಾಲಿನಿಂದ ಈವರೆಗೆ ಮಾಗಡಿ ಕ್ಷೇತ್ರದ ವ್ಯಾಪ್ತಿಯಲ್ಲಿ ಆರಂಭಿಸಿದ ಹೊಸ ಶಾಲೆಗಳು ಯಾವುದು; (ವಿವರ ನೀಡುವುದು);

2. ನಿರ್ಮಾಣವಾಗಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಶಾಲಾ ಕಟ್ಟಡಗಳು ಯಾವುವು; (ವಿವರ ನೀಡುವುದು);

3. ಇವುಗಳ ಅಂದಾಜು ವೆಚ್ಚವೆಷ್ಟು; ಖರ್ಚಾದ ಮೊತ್ತ ಎಷ್ಟು;

4. ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಯಾವಾಗ ಪೂರ್ಣ ಗೊಳಿಸಲಾಗುವುದು;

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

1. 4 ಪ್ರಾಥಮಿಕ ಹಾಗೂ 1 ಅನುದಾನ ರಹಿತ ಶಾಲೆಯನ್ನು ಪ್ರಾರಂಭಿಸಲಾಗಿದೆ. ಯಾವುದೇ ಪ್ರೌಢ ಶಾಲೆಯನ್ನು ಪ್ರಾರಂಭಿಸಿರುವುದಿಲ್ಲ. ವಿವರ ಈ ಕೆಳಕಂಡಂತೆ ಇರುತ್ತದೆ;

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು:-

1. ತೊರೇಪಾಳ್ಯ, 2. ಕೆಂಪಯ್ಯನ ಪಾಳ್ಯ, 3. ಗೊಲ್ಲರಹಟ್ಟಿ, 4. ರಾಜೀವಗಾಂಧಿನಗರ.

1. ಕನ್ಯಾ ಕಾಲೋನಿ (ಖಾಸಗಿ ಅನುದಾನ ರಹಿತ)

2. ನಿರ್ಮಾಣ ಹಂತದಲ್ಲಿರುವ ಶಾಲಾ ಕಟ್ಟಡಗಳ ವಿವರಗಳು ಈ ಕೆಳಕಂಡಂತೆ ಇರುತ್ತದೆ.

1. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಲ್ಯಾ ಗೇಟ್ ತಾರಸಿ ಹಂತದಲ್ಲಿದೆ.